# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಡಾ:ಎಂ.ಜಿ.ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು), |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 225 |
| ಉತ್ತರಿಸಬೇಕಾದ ದಿನಾಂಕ | : | 28.01.2026 |
| ಉತ್ತರಿಸಬೇಕಾದ ಸಚಿವರು | : | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ಈವರೆಗೆ ಬಸವ ವಸತಿ ಯೋಜನೆ ಮತ್ತು ಡಾ:ಬಿ.ಆರ್.ಅಂಬೇಡ್ಕರ್ ನಿವಾಸ್ ಯೋಜನೆಯಡಿ ಮಂಜೂರಾದ ಒಟ್ಟು ಮನೆಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು).</td><td rowspan="2">ಬೀದರ್ ಜಿಲ್ಲೆಯಲ್ಲಿ 2022-23ನೇ ಸಾಲಿನಿಂದ ಇಲ್ಲಿಯವರೆಗೆ ಬಸವ ವಸತಿ ಯೋಜನೆ ಹಾಗೂ ಡಾ|| ಬಿ. ಆರ್ ಅಂಬೇಡ್ಕರ್ ನಿವಾಸ್ ಯೋಜನೆಯಡಿ 948 ಮನೆಗಳನ್ನು ಮಂಜೂರು ಮಾಡಲಾಗಿದೆ. ಯೋಜನಾ/ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.
<table>
<tr><th>ಯೋಜನೆ</th><th>ತಾಲ್ಲೂಕು</th><th>ಮಂಜೂರಾದ ಮನೆಗಳು</th><th>ಪೂರ್ಣಗೊಂಡ ಮನೆಗಳು</th><th>ಪ್ರಗತಿಯಲ್ಲಿರುವ ಮನೆಗಳು</th><th>ಪ್ರಾರಂಭವಾಗದ ಮನೆಗಳು</th><th>ತಾತ್ಕಲಿಕವಾಗಿ ತಡೆಹಿಡಿಯಲಾದ ಮನೆಗಳು</th></tr>
<tr><td rowspan="2">ಬಸವ ವಸತಿ (Reallocation)</td><td>ಭಾಲ್ಕಿ</td><td>656</td><td>0</td><td>187</td><td>463</td><td>6</td></tr>
<tr><td>ಬೀದರ್</td><td>60</td><td>13</td><td>31</td><td>16</td><td>0</td></tr>
<tr><td rowspan="2">ಡಾ|| ಬಿ.ಆರ್ ಅಂಬೇಡ್ಕರ್ ನಿವಾಸ್ -ಗ್ರಾ (Reallocation)</td><td>ಭಾಲ್ಕಿ</td><td>209</td><td>0</td><td>97</td><td>106</td><td>6</td></tr>
<tr><td>ಬೀದರ್</td><td>23</td><td>10</td><td>11</td><td>2</td><td>0</td></tr>
<tr><td colspan="2">ಒಟ್ಟು</td><td>948</td><td>23</td><td>326</td><td>587</td><td>12</td></tr>
</table>
ಕೆಲವು ಫಲಾನುಭವಿಗಳು ಈ ಕೆಳಕಂಡ ಕಾರಣಗಳಿಂದ ಮನೆ ನಿರ್ಮಾಣ ಮಾಡಲು ಬಾಕಿ ಇರುವುದು ಕಂಡು ಬಂದಿರುತ್ತದೆ.
<ul>
<li>ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ನೀಡುವ ಸಹಾಯಧನ ಕಡಿಮೆ ಎಂದು ಕೆಲವು ಅನುಷ್ಠಾನಾಧಿಕಾರಿಗಳು ಹಾಗೂ ಫಲಾನುಭವಿಗಳಿಂದ ತಿಳಿದು ಬಂದಿರುತ್ತದೆ.</li>
<li>ಮನೆ ನಿರ್ಮಿಸಿಕೊಳ್ಳಲು ನೀರಿನ ಸಮಸ್ಯೆ ಮತ್ತು ಮರಳಿನ ಸಮಸ್ಯೆ ಇರುವುದು.</li>
<li>ನಿವೇಶನದ ತಕರಾರು /ಜಂಟಿ ಖಾತೆ ಹೊಂದಿರುವುದು.</li>
<li>ಕಟ್ಟಡ ಸಾಮಾಗ್ರಿಗಳ ಬೆಲೆಯು ಗಗನಕ್ಕೇರುತ್ತಿರುವುದು,</li>
<li>ಫಲಾನುಭವಿಗಳ ವೈಯಕ್ತಿಕ ಸಮಸ್ಯೆಗಳು.</li>
<li>ಫಲಾನುಭವಿಗಳು ವಲಸೆ ಹೋಗಿರುವುದು.</li>
</ul>
ಆದಾಗ್ಯೂ ಫಲಾನುಭವಿಗಳ ಮನವೊಲಿಸಿ ಮನೆಗಳನ್ನು ನಿರ್ಮಿಸಲು ಬೇಕಾದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.</td></tr>
<tr><td>ಆ)</td><td>ಈ ಪೈಕಿ ಎಷ್ಟು ಮನೆಗಳು ಪೂರ್ಣಗೊಂಡಿವೆ ಮತ್ತು ಎಷ್ಟು ಮನೆಗಳು ವಿವಿಧ ಹಂತಗಳಲ್ಲಿ ಬಾಕಿ ಇವೆ; ಬಾಕಿ ಇರಲು ಕಾರಣಗಳೇನು;</td></tr>
<tr><td>ಇ)</td><td>ಫಲಾನುಭವಿಗಳಿಗೆ ಪಾವತಿಸಬೇಕಾದ ಬಾಕಿ ಹಣ (Pending Payment) ಎಷ್ಟು; ಈ ಬಾಕಿ ಮೊತ್ತವನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;</td><td>ವಿವಿಧ ವಸತಿ ಯೋಜನೆಗಳಡಿ ಆಯ್ಕೆ ಮಾಡಲಾದ ಅರ್ಹ ಫಲಾನುಭವಿಗಳು ನಿರ್ಮಾಣ ಮಾಡಿಕೊಂಡು ವಿವಿಧ ಹಂತದಲ್ಲಿರುವ ಮನೆಗಳಿಗೆ ಜಿಪಿಎಸ್ ಆಧಾರಿತ ಭೌತಿಕ ಪ್ರಗತಿಗನುಸಾರ ಮತ್ತು ಅನುದಾನದ ಲಭ್ಯತೆಗೆ ಅನುಗುಣವಾಗಿ ನೇರವಾಗಿ ಆಧಾರ್ ಜೋಡಣೆಗೊಂಡ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಖಜಾನೆಯ ತಂತ್ರಾಂಶದ ಮೂಲಕ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಪ್ರಸ್ತುತ ಜಿ.ಪಿ.ಎಸ್ ಪ್ರಗತಿ ಅಪ್‌ಡೇಟ್ ಆಗಿರುವ ಅರ್ಹ ಫಲಾನುಭವಿಗಳಿಗೆ ಯಾವುದೇ ವಸತಿ ಯೋಜನೆಗಳಡಿ ಅನುದಾನ ಬಿಡುಗಡೆ ಮಾಡಲು ಬಾಕಿ ಇರುವುದಿಲ್ಲ.<br><br>ಮುಂದುವರೆದು, ಕಳೆದ ಮೂರು ವರ್ಷಗಳಿಂದ ಅಂದರೆ 2022 23ನೇ ಸಾಲಿನಿಂದ ಈವರೆಗೆ ಬೀದರ್ ಜಿಲ್ಲೆಗೆ ಮಂಜೂರಾದ ಮನೆಗಳಲ್ಲಿ ಪ್ರಗತಿಯಲ್ಲಿರುವ ಅರ್ಹ ಫಲಾನುಭವಿಗಳ ಮನೆಗಳಿಗೆ ಬಿಡುಗಡೆ ಮಾಡಲಾದ ಅನುದಾನದ ವಿವರಗಳನ್ನು ಕೆಳಗೆ ನೀಡಿದೆ:</td></tr>
</table>

<table>
<tr><td></td><td></td><td>

| ಕ್ರ ಸಂ | ಯೋಜನೆ | ಬಿಡುಗಡೆ ಮಾಡಲಾದ ಮೊತ್ತ (ಲಕ್ಷಗಳಲ್ಲಿ) |
|---|---|---|
| 1 | ಬಸವ ವಸತಿ ಯೋಜನೆ | 78.81 |
| 2 | ಡಾ.ಬಿ.ಆರ್ ಅಂಬೇಡ್ಕರ್ ನಿವಾಸ್ ಯೋಜನೆ (ಗ್ರಾಮೀಣ) | 76.63 |
| | ಒಟ್ಟು | 155.44 |

</td></tr>
<tr><td>ರ)</td><td>ಜಿಲ್ಲೆಯಲ್ಲಿ ವಸತಿ ರಹಿತರ ಸಂಖ್ಯೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಪ್ರಸಕ್ತ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಹೆಚ್ಚುವರಿಯಾಗಿ ಎಷ್ಟು ಹೊಸ ಮನೆಗಳನ್ನು ಮಂಜೂರು ಮಾಡಲು ಉದ್ದೇಶಿಸಲಾಗಿದೆ?</td><td>ಹೌದು,<br><br>2018ರಲ್ಲಿ ರಾಜ್ಯದ ಗ್ರಾಮೀಣ ಪ್ರದೇಶದಲ್ಲಿ ವಸತಿ/ನಿವೇಶನರಹಿತರ ಸಮೀಕ್ಷೆ ಕೈಗೊಳ್ಳಲಾಗಿದ್ದು. ಸದರಿ ಸಮೀಕ್ಷೆಯನ್ವಯ ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ 83168 ವಸತಿರಹಿತರು 4495 ನಿವೇಶನರಹಿತರು ಕಂಡು ಬಂದಿರುತ್ತಾರೆ.<br><br>ಮುಂದುವರೆದು, ಪ್ರಧಾನ ಮಂತ್ರಿ ಆವಾಸ್ ಯೋಜನೆ ನಗರದಡಿ 2016 17 & 2017-18ನೇ ಸಾಲಿನಲ್ಲಿ ರಾಜ್ಯಾದ್ಯಂತ ನಡೆಸಿದ ಬೇಡಿಕೆ ಸಮೀಕ್ಷೆಯ ಪ್ರಕಾರ ಬೀದರ್ ವ್ಯಾಪ್ತಿಯಲ್ಲಿ 15932 ವಸತಿರಹಿತರು 19384 ನಿವೇಶನರಹಿತರು ಕಂಡು ಬಂದಿರುತ್ತಾರೆ.<br><br>ಮುಂದಿನ ದಿನಗಳಲ್ಲಿ ಆಯವ್ಯಯದಲ್ಲಿ ನಿಗಧಿಪಡಿಸುವ ಅನುದಾನಕ್ಕೆ ಅನುಗುಣವಾಗಿ ಗ್ರಾಮ ಪಂಚಾಯತಿವಾರು/ ಸ್ಥಳೀಯ ಸಂಸ್ಥೆಗಳವಾರು ಮನೆಗಳ ಗುರಿ ನಿಗಧಿಪಡಿಸಿ ಸರ್ಕಾರದಿಂದ ಹಂತ ಹಂತವಾಗಿ ಎಲ್ಲಾ ಅರ್ಹ ವಸತಿರಹಿತರಿಗೆ ವಸತಿ ಸೌಕರ್ಯ ಒದಗಿಸಲು ಕ್ರಮವಹಿಸಲಾಗುತ್ತದೆ.</td></tr>
</table>

ಸಂಖ್ಯೆ: ವಇ 20 ಹೆಚ್‌ಎಎಂ 2026

(ಬಿ.ಜೆಡ್. ಜಮೀರ್ ಅಹ್ಮದ್‌ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು